**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಭಟ್ಕಳ**

**ಸಿ.ಸಿ. ನಂ. 1776/2025**

**ಸಿ.ಡಬ್ಲ್ಯೂಃ 3, ಪಿ.ಡಬ್ಲ್ಯೂಃ 3**

| | | |
|---|---|---|
| **ಸಾಕ್ಷಿದಾರರ ಹೆಸರು** | : | **ಭಾಸ್ಕರ ದುರ್ಗಪ್ಪ ನಾಯ್ಕ** |
| **ತಂದೆಯ ಹೆಸರು** | : | **ದುರ್ಗಪ್ಪ ನಾಯ್ಕ** |
| **ವಯಸ್ಸು** | : | **37 ವರ್ಷ** |
| **ಉದ್ಯೋಗ** | : | **ಅಡುಗೆ ಕೆಲಸ** |
| **ವಾಸ** | : | **ದಿವಗೇರಿ, ಮುರ್ಡೇಶ್ವರ** |

**ಸತ್ಯ ಪ್ರತಿಜ್ಞೆಯ ಮೇರೆಗೆ, ತಾಃ 25-10-2025**

**ಮುಖ್ಯ ವಿಚಾರಣೆಃ ಎ.ಪಿ.ಪಿ. ಯವರಿಂದಃ-**

ಈಗ ತೋರಿಸುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ ಅದು ಘಟನಾ ಸ್ಥಳದ ಪಂಚನಾಮೆ ಮತ್ತು ನಕ್ಷೆ ಇದ್ದು, ಅವುಗಳನ್ನು ಈಗಾಗಲೇ ನಿಪಿ-2 ಮತ್ತು 3 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿ-2(ಬಿ ) ಮತ್ತು ನಿಪಿ-3(ಬಿ) ಎಂದು ಗುರುತಿಸಲಾಯಿತು. ನಿಪಿ-2 ಮತ್ತು ನಿಪಿ-3 ಕ್ಕೆ ಈಗ ಆರು ತಿಂಗಳ ಹಿಂದೆ ಬಸ್ತಿ ಪಂಚಾಯತಿ ಕ್ರಾಸ್ ಹತ್ತಿರ ಒಂದು ಕೆ ಎಸ್ ಆರ್ ಟಿ ಸಿ ಬಸ್ಸ ವೇಗವಾಗಿ ಬಂದು ಒಬ್ಬ ಮಹಿಳೆ ರಸ್ತೆ ದಾಟುತ್ತಿದ್ದಾಗ ಡಿಕ್ಕಿಪಡಿಸಿ ಅಪಘಾತಪಡಿಸಿದ ವಿಚಾರವಾಗಿ ಪಂಚನಾಮೆ ಮಾಡಿದ್ದಕ್ಕೆ ಸಹಿ ಮಾಡಿರುತ್ತೇನೆ. ನನ್ನೊಂದಿಗೆ ಚಾಸಾ-2 ರವರು ಸಹಿ ಮಾಡಿರುತ್ತಾರೆ. ಪಂಚನಾಮೆಯ ಕಾಲಕ್ಕೆ ಮೂರು ಫೋಟೊ ತೆಗೆದಿರುತ್ತಾರೆ. ಸದ್ರಿ ಫೋಟೊಗಳನ್ನು ನೋಡುತ್ತಿದ್ದು ಅವುಗಳನ್ನು ಈಗಾಗಲೇ ನಿಪಿ-4 ರಿಂದ ನಿಪಿ-6 ಎಂದು ಗುರುತಿಸಲಾಗಿದೆ. ಪಂಚನಾಮೆಯನ್ನು ಮಧ್ಯಾಹ್ನ 12.00 ಗಂಟೆಯಿಂದ 1.00 ಗಂಟೆಯವರೆಗೆ ಮಾಡಿರುತ್ತಾರೆ.

**(ಈ ಹಂತದಲ್ಲಿ ಎಪಿಪಿಯವರು ಸದ್ರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಎಪಿಪಿಯವರಿಂದ:**

ನಿಪಿ–2 ಮತ್ತು ನಿಪಿ–3 ಕ್ಕೆ ದಿನಾಂಕ 25.08.2025 ರಂದು ಕಾಯ್ಕಿಣಿ ಗ್ರಾಮ ಪಂಚಾಯತಿ ಕ್ರಾಸ್ ಹತ್ತಿರ ಪಂಚನಾಮೆ ಮಾಡಿದ್ದಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ಕೆ ಎಸ್ ಆರ್ ಟಿ ಸಿ ಬಸ್ಸ ಚಾಲಕ ರಾಜವಿ ಎನ್ನುವ ಮಹಿಳೆ ರಸ್ತೆ ದಾಟುತ್ತಿದ್ದಾಗ ಡಿಕ್ಕಿಪಡಿಸಿ ಗಾಯಗೊಳಿಸಿದ್ದಕ್ಕೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲು: ಆರೋಪಿ ಪರ ಶ್ರೀ ಕೆ.ಹೆಚ್.ಎನ್. ವಕೀಲರಿಂದ:**

ನಾನು 5 ನೇ ತರಗತಿಯವರೆಗೆ ಓದಿರುತ್ತೇನೆ. ನನಗೆ ಕನ್ನಡ ಓದಲು ಬರೆಯಲು ಬರುವುದಿಲ್ಲ. ಪಂಚನಾಮೆಯಲ್ಲಿ ಬರೆದಿರುವ ವಿಚಾರವನ್ನು ನನಗೆ ಓದಿ ತಿಳಿಸಿರುವುದಿಲ್ಲ, ಅದರಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಓದಿ ಹೇಳಿರುವುದಿಲ್ಲ. ಪಂಚನಾಮೆಯನ್ನು ಕೈಬರಹದಲ್ಲಿ ಬರೆದಿದ್ದರು. ಈ ದಿನ ತೋರಿಸಿದ ಪಂಚನಾಮೆ ಕಂಪ್ಯೂಟರಿಕರಣದಲ್ಲಿ ಟೈಪ್ ಮಾಡಿದ್ದು ಇರುತ್ತದೆ ಎಂದರೆ ಸರಿ. ಪೊಲೀಸರು ಒಟ್ಟು 4–5 ದಾಖಲೆಗಳಿಗೆ ಸಹಿ ಪಡೆದಿರುತ್ತಾರೆ. ಪೊಲೀಸರು ಸುಳ್ಳಾಗಿ ತಯಾರಿಸಿದ ಪಂಚನಾಮೆಗೆ ನಾನು ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ–2 ರವರ ಮನೆ ಮೃತಳ ಮನೆಯ ಹತ್ತಿರ ಇರುತ್ತದೆ. ಚಾಸಾ–1 ನನ್ನ ಗೆಳೆಯ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ, ಮೃತಳ ಕುಟುಂಬವರಿಗೆ ಪರಿಹಾರ ಸಿಗಲೆಂದು ಪೊಲೀಸರು ಠಾಣೆಯಲ್ಲಿ ತಯಾರಿಸಿದ ಪಂಚನಾಮೆಗೆ ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನಿಪಿ–4 ರಿಂದ ನಿಪಿ–6 ಸುಳ್ಳು ಸೃಷ್ಟಿ ಮಾಡಿಲಾಗಿದೆ ಎಂದರೆ ಸರಿಯಲ್ಲ.

**ಮರು ವಿಚಾರಣೆ –ಇಲ್ಲ.**

**(ತೆ.ನ್ಯಾದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಿಸಲಾಯಿತು)**

**ಓ ಹೇ ಕೇ ಸರಿ ಇದೆ.**

**ಸಹಿ ಇದೆ.**

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ನ್ಯಾಯಾಲಯ ಭಟ್ಕಳ.**